ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೆರಡನೆಯ ಅಧಿವೇಶನ
ಶುಕ್ರವಾರ, ದಿನಾಂಕ: 11ನೇ ಡಿಸೆಂಬರ್, 2020

ಕೆ.ಎಸ್.ಆರ್.ಟಿ.ಸಿ ನಿಗಮದಿಂದ ಬಸ್ ದರ ಹೆಚ್ಚಳ ಮಾಡಿರುವ ಬಗ್ಗೆ

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

453(519) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ದೀಪಾವಳಿಯ ಸಂದರ್ಭದಲ್ಲಿ ಖಾಸಗಿ ಬಸ್‌ಗಳು ಪ್ರಯಾಣ ದರ ಏರಿಕೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ; ಅದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮವೇನು;

(ಇ) ಕೆ.ಎಸ್.ಆರ್.ಟಿ.ಸಿ ನಿಗಮದಿಂದಲೂ ಪ್ರಯಾಣ ದರ ಹೆಚ್ಚಿಸಿದ್ದು, ಹೆಚ್ಚಿಸಿರುವ ದರದ ಪ್ರಮಾಣ ಎಷ್ಟು; ಇದರಿಂದ ಉಂಟಾದ ಲಾಭದ ಪ್ರಮಾಣ ಎಷ್ಟು? (ವಿಭಾಗವಾರು ವಿವರ ನೀಡುವುದು)